ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

**ಅತಿ ಜರೂರು**

ಸಂಖ್ಯೆ: ಕಾಶಿಇ/ವಿಯೋ/ಯುವಕೌಶಲ್ಯ/15/2019-20

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001,
ದಿನಾಂಕ: 28.01.2020

# ಸುತ್ತೋಲೆ

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅಂತಿಮ ವರ್ಷದ ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ 'ಕರ್ನಾಟಕ ವೃತ್ತಿ ತರಬೇತಿ ನಿಗಮ ನಿಯಮಿತ' ಆಯೋಜಿಸುತ್ತಿರುವ 'ಯುವಕೌಶಲ್ಯ' ಕಾರ್ಯಕ್ರಮದ ಬಗ್ಗೆ.

ಉಲ್ಲೇಖ: ಕರ್ನಾಟಕ ವೃತ್ತಿ ತರಬೇತಿ ನಿಗಮ ನಿಯಮಿತದ ಪತ್ರಸಂಖ್ಯೆ: ಕೆವಿಟಿಎಸ್‌ಡಿಸಿ/ಆಡಳಿತ/ಕೌಶಲ್ಯಭಾಗ್ಯ/ವಿವ-39/2019-20 ದಿ:27-01-2020

* * * * *

ಮೇಲ್ಕಂಡ ವಿಷಯ ಮತ್ತು ಉಲ್ಲೇಖದನ್ವಯ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ರಾಜ್ಯಾದ್ಯಂತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅಂತಿಮ ವರ್ಷದ ಉದ್ಯೋಗಾಕಾಂಕ್ಷಿ ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ 'ಯುವಕೌಶಲ್ಯ' ಕಾರ್ಯಕ್ರಮದಡಿ ಮೃದುಕೌಶಲ್ಯ ತರಬೇತಿ ಮತ್ತು ಮೌಲ್ಯಮಾಪನಾ ಕಾರ್ಯಕ್ರಮವನ್ನು ಫೆಬ್ರವರಿ ೨೦೨೦ರ ಮೊದಲನೆಯ ವಾರದಿಂದ ಉಚಿತವಾಗಿ ಆಯೋಜಿಸುತ್ತಿದೆ. ಸದರಿ ಕಾರ್ಯಕ್ರಮಕ್ಕೆ ಸಂಬಂಧಪಟ್ಟಂತೆ ಕಾಲೇಜು ಅಥವಾ ವಿದ್ಯಾರ್ಥಿಗಳ ಮೇಲೆ ಯಾವುದೇ ಆಥಿಕ ಹೊಣೆಗಾರಿಕೆ ಇರುವುದಿಲ್ಲ. ಈ ಕುರಿತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಧಿಕಾರಿಗಳು ಮತ್ತು ಮೃದುಕೌಶಲ್ಯ ತರಬೇತಿದಾರರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಭೇಟಿ ನೀಡಿದಾಗ ಸಂಬಂಧಪಟ್ಟ ಪ್ರಾಂಶುಪಾಲರು ಈ ತರಬೇತಿ ಕಾರ್ಯಕ್ರಮವನ್ನು ನಡೆಸಲು ಎಲ್ಲ ಬಗೆಯ ಸಹಕಾರವನ್ನು ನೀಡಿ, ಕಾಲೇಜಿನ ಮೂಲಸೌಕರ್ಯವನ್ನು ಉಪಯೋಗಿಸಿಕೊಳ್ಳಲು ಮತ್ತು ಅಂತಿಮ ವರ್ಷದ ಉದ್ಯೋಗಾಕಾಂಕ್ಷಿ ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳನ್ನು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಅನುಮತಿಸುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮಂಗಳೂರು, ಮೈಸೂರು. ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ
2. ಎಲ್ಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ –ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
4. ಕಛೇರಿ ಪ್ರತಿ.